**All India Radio: Bangalore**
**National Bulletin In Kannada**
**10.12.2025 7.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**10.12.2025 7.35 a.m.**

**<>><><*><><<>**

ಮುಖ್ಯಾಂಶಗಳು

**೧. ಭಾರತದಲ್ಲಿ ೧೭.೫ ಶತಕೋಟಿ ಅಮೆರಿಕನ್ ಡಾಲರ್ ಹೂಡಿಕೆಗೆ ಮೈಕ್ರೋಸಾಫ್ಟ್ ನಿರ್ಧಾರ**

**೨. ಲೋಕಸಭೆಯಲ್ಲಿಂದು ಚುನಾವಣಾ ಪ್ರಕ್ರಿಯೆ, ರಾಜ್ಯಸಭೆಯಲ್ಲಿಂದು ವಂದೇ ಮಾತರಂ ಕುರಿತ ಚರ್ಚೆ ಮುಂದುವರಿಕೆ**

**೩. ಇಂಡಿಗೊದ ಉನ್ನತ ಆಡಳಿತ ಮಂಡಳಿಯೊಂದಿಗೆ ನಾಗರಿಕ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು ಸಭೆ**

**೪. ಟಿ-೨೦ ಕ್ರಿಕೆಟ್; ದಕ್ಷಿಣ ಆಫ್ರಿಕಾ ವಿರುದ್ಧ ಭಾರತ ತಂಡಕ್ಕೆ ಭರ್ಜರಿ ಗೆಲುವು**

**<>><><*><><<>**

ಜಾಗತಿಕ ಸಾಫ್ಟ್‌ವೇರ್ ದೈತ್ಯ ಮೈಕ್ರೋಸಾಫ್ಟ್ ಭಾರತದಲ್ಲಿ ೧೭.೫ ಶತಕೋಟಿ ಅಮೆರಿಕನ್ ಡಾಲರ್ ಹೂಡಿಕೆ ಮಾಡುವುದಾಗಿ ತಿಳಿಸಿದೆ. ಪ್ರಧಾನಿ ನರೇಂದ್ರ ಮೋದಿಯವರನ್ನು ನಿನ್ನೆ ಭೇಟಿಯಾದ ನಂತರ ಮೈಕ್ರೋಸಾಫ್ಟ್ ಮುಖ್ಯ ಕಾರ್ಯನಿರ್ವಣಾಧಿಕಾರಿ ಸತ್ಯ ನಾಡೆಲ್ಲಾ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಈ ವಿಷಯ ತಿಳಿಸಿದ್ದಾರೆ. ಭಾರತದ ಮಹತ್ವಾಕಾಂಕ್ಷೆಗಳನ್ನು ಬೆಂಬಲಿಸಲು ಮೈಕ್ರೋಸಾಫ್ಟ್ ಏಷ್ಯಾದಲ್ಲಿ ಇದುವರೆಗಿನ ಅತಿದೊಡ್ಡ ಹೂಡಿಕೆಯನ್ನು ಮಾಡುತ್ತಿದೆ. ಭಾರತದ ಕೃತಕ ಬುದ್ಧಿಮತ್ತೆ ವಲಯದ ಭವಿಷ್ಯಕ್ಕೆ ಅಗತ್ಯವಿರುವ ಮೂಲಸೌಕರ್ಯ, ಕೌಶಲ್ಯ ಮತ್ತು ಸಾಮರ್ಥ್ಯಗಳನ್ನು ನಿರ್ಮಿಸಲು ಸಹಾಯ ಮಾಡಲು ಬದ್ಧವಾಗಿದೆ ಎಂದು ಅವರು ಹೇಳಿದರು. ಜನಸಂಖ್ಯೆಯ ಪ್ರಮಾಣದಲ್ಲಿ ಎಐ ಪ್ರಸರಣವನ್ನು ಹೆಚ್ಚಿಸಲು ೨೦೨೬ ರಿಂದ ೨೦೨೯ ರವರೆಗೆ ಮುಂದಿನ ನಾಲ್ಕು ವರ್ಷಗಳಲ್ಲಿ ಭಾರತದಲ್ಲಿ ೧೭.೫ ಶತಕೋಟಿ ಅಮೆರಿಕನ್ ಡಾಲರ್ ಹೂಡಿಕೆ ಮಾಡಲು ಕಂಪನಿ ಯೋಜಿಸಿದೆ ಎಂದು ಮೈಕ್ರೋಸಾಫ್ಟ್ ತಿಳಿಸಿದೆ. ಮೈಕ್ರೋಸಾಫ್ಟ್‌ನಿಂದ ಏಷ್ಯಾದಲ್ಲಿ ಇದುವರೆಗಿನ ಅತಿದೊಡ್ಡ ಹೂಡಿಕೆಯನ್ನು ಪ್ರಧಾನಿ ನರೇಂದ್ರ ಮೋದಿ ಸ್ವಾಗತಿಸಿದ್ದಾರೆ ಮತ್ತು ಕೃತಕ ಬುದ್ಧಿಮತ್ತೆಯಲ್ಲಿ ಭಾರತದ ನಾಯಕತ್ವದ ಬಗ್ಗೆ ಆಶಾವಾದ ವ್ಯಕ್ತಪಡಿಸಿದ್ದಾರೆ. ಸತ್ಯ ನಾಡೆಲ್ಲಾ ಅವರ ಸಾಮಾಜಿಕ ಮಾಧ್ಯಮದ ಪೋಸ್ಟ್‌ಗೆ ಪ್ರತಿಕ್ರಿಯಿಸಿರುವ ಪ್ರಧಾನಿ, ಎಐ ವಿಷಯಕ್ಕೆ ಬಂದರೆ, ಜಗತ್ತು ಭಾರತದ ಬಗ್ಗೆ ಆಶಾವಾದಿಯಾಗಿದೆ. ಮೈಕ್ರೋಸಾಫ್ಟ್ ತನ್ನ ಇದುವರೆಗಿನ ಅತಿದೊಡ್ಡ ಹೂಡಿಕೆ ಮಾಡುವ ಸ್ಥಳ ಭಾರತವಾಗಿರುವುದನ್ನು ನೋಡಿ ಸಂತೋಷವಾಗಿದೆ. ದೇಶದ ಯುವಕರು ಈ ಅವಕಾಶವನ್ನು ಬಳಸಿಕೊಳ್ಳುತ್ತಾರೆ ಎಂದು ಹೇಳಿದರು. ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ನಿನ್ನೆ ಮೈಕ್ರೋಸಾಫ್ಟ್ ಸಿಇಒ ಸತ್ಯ ನಾಡೆಲ್ಲಾ ಅವರನ್ನು ಭೇಟಿಯಾದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಸಚಿವರು, ಸಾರ್ವಜನಿಕ ಒಳಿತಿಗಾಗಿ, ಗಡಿನಾಡು ತಂತ್ರಜ್ಞಾನಗಳು ಮತ್ತು ಡೇಟಾ ಸಾರ್ವಭೌಮತ್ವಕ್ಕಾಗಿ ಎಐ ಬಳಕೆಯ ಕುರಿತು ಚರ್ಚಿಸಲಾಯಿತು. ಈ ಪಾಲುದಾರಿಕೆಯು ದೇಶವನ್ನು ಡಿಜಿಟಲ್‌ನಿಂದ ಎಐ ಸಾರ್ವಜನಿಕ ಮೂಲಸೌಕರ್ಯಕ್ಕೆ ಮೇಲ್ದರ್ಜೆಗೇರಿಸುತ್ತದೆ ಎಂದು ಹೇಳಿದ್ದಾರೆ.

**<>><><*><><<>**

ಲೋಕಸಭೆಯಲ್ಲಿ ಇಂದು ಚುನಾವಣಾ ಸುಧಾರಣೆಗಳ ಕುರಿತು ಚರ್ಚೆ ಮುಂದುವರಿಯಲಿದೆ. ಚುನಾವಣಾ ಸುಧಾರಣೆಗಳ ಕುರಿತು ಚರ್ಚೆಯಲ್ಲಿ ನಿನ್ನೆ ಭಾಗವಹಿಸಿದ ಕೇಂದ್ರ ಕಾನೂನು ಮತ್ತು ನ್ಯಾಯ ಸಚಿವ ಅರ್ಜುನ್

ರಾಮ್ ಮೇಘವಾಲ್, ಕಾಂಗ್ರೆಸ್ ಆಡಳಿತದ ಅವಧಿಯಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಅನ್ನು ಹಲವಾರು ಬಾರಿ ನಡೆಸಲಾಗಿತ್ತು. ಆದರೆ ಈಗ ವಿರೋಧ ಪಕ್ಷಗಳು ಈ ಪ್ರಕ್ರಿಯೆಯ ಬಗ್ಗೆ ಪ್ರಶ್ನೆಗಳನ್ನು ಎತ್ತುತ್ತಿವೆ ಎಂದು ಹೇಳಿದರು. ಸ್ವಾತಂತ್ರ್ಯದ ನಂತರ ಎಲ್ಲರಿಗೂ ಸಮಾನ ಮತದಾನದ ಹಕ್ಕುಗಳಿವೆ ಎಂದು ಹೇಳುವ ಮೂಲಕ ಅವರು, ದೇಶದ ಮತದಾನ ರಚನೆಯನ್ನು ಶ್ಲಾಘಿಸಿದರು. ಚುನಾವಣಾ ಸುಧಾರಣೆಗಳ ಕುರಿತು ಮಾತನಾಡಿದ ಲೋಕಸಭೆಯ ವಿರೋಧ ಪಕ್ಷದ ನಾಯಕ ಮತ್ತು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಮತದಾರರ ಪಟ್ಟಿಯಲ್ಲಿ ನಕಲಿ ಮತದಾರರ ವಿಷಯವನ್ನು ಎತ್ತಿದರು. ಬಿಹಾರದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಕುರಿತು ಚುನಾವಣಾ ಆಯೋಗವನ್ನು ಪ್ರಶ್ನಿಸಿದರು. ಮತದಾನ ಪಟ್ಟಿಯಲ್ಲಿ ಒಂದು ಲಕ್ಷ ೨೦ ಸಾವಿರ ನಕಲಿ ಫೋಟೋಗಳಿವೆ ಎಂದು ಅವರು ಆರೋಪಿಸಿದರು. ರಾಜ್ಯಸಭೆಯಲ್ಲಿ, ವಂದೇ ಮಾತರಂ ನ ೧೫೦ ನೇ ವಾರ್ಷಿಕೋತ್ಸವದ ಕುರಿತು ಸದನವು ಇಂದು ಚರ್ಚೆಯನ್ನು ಮುಂದುವರಿಸಲಿದೆ.  ಚರ್ಚೆಯಲ್ಲಿ ನಿನ್ನೆ ಭಾಗವಹಿಸಿದ ಕೇಂದ್ರ ಗೃಹ ಸಚಿವ ಅಮಿತ್ ಶಾ, ದೇಶದ ವಿಕಸಿತ ಭಾರತದತ್ತ ಪ್ರಯಾಣದಲ್ಲಿ ವಂದೇ ಮಾತರಂ ಪ್ರಸ್ತುತವಾಗಿರುತ್ತದೆ ಎಂದು ಹೇಳಿದರು. ಸ್ವಾತಂತ್ರ್ಯ ಹೋರಾಟಗಾರರು ಪ್ರತಿ ಸಭೆಯನ್ನು ವಂದೇ ಮಾತರಂ ಹಾಡುವುದರೊಂದಿಗೆ ಪ್ರಾರಂಭಿಸುತ್ತಿದ್ದರು ಮತ್ತು ಇಂದು, ಧೈರ್ಯಶಾಲಿ ಸೈನಿಕರು, ಗಡಿಯಲ್ಲಿ ಸರ್ವೋಚ್ಚ ತ್ಯಾಗ ಮಾಡಿದಾಗ, ಅವರು ವಂದೇ ಮಾತರಂ ಅನ್ನು ಉಚ್ಚರಿಸುತ್ತಾರೆ ಎಂದರು. ವಂದೇ ಮಾತರಂ ಮೂಲಕ ಬಂಕಿಮ್ ಚಂದ್ರ ಚಟ್ಟೋಪಾಧ್ಯಾಯ ದೇಶವನ್ನು ತಾಯಿಯಾಗಿ ಪೂಜಿಸುವ ಸಂಸ್ಕೃತಿ, ಸಂಪ್ರದಾಯ ಮತ್ತು ಸಾಂಸ್ಕೃತಿಕ ರಾಷ್ಟ್ರೀಯತೆಯನ್ನು ಸ್ಥಾಪಿಸಿದರು. ಎಲ್ಲಾ ನಿರ್ಬಂಧಗಳನ್ನು ನಿವಾರಿಸಿ, ದಬ್ಬಾಳಿಕೆ ಮತ್ತು ಹಲವಾರು ಕಷ್ಟಗಳನ್ನು ಸಹಿಸಿಕೊಂಡು, ವಂದೇ ಮಾತರಂ ದೇಶವಾಸಿಗಳ ಹೃದಯಗಳನ್ನು ಮುಟ್ಟಿತು ಮತ್ತು ಕಾಶ್ಮೀರದಿಂದ ಕನ್ಯಾಕುಮಾರಿಯವರೆಗೆ ಹರಡಿತು ಎಂದು ಸಚಿವ ಅಮಿತ್ ಶಾ ಹೇಳಿದರು. ದೇಶದ ಸಂಸ್ಕೃತಿಯನ್ನು ದುರ್ಬಲಗೊಳಿಸಿದ ಶತಮಾನಗಳ ಇಸ್ಲಾಮಿಕ್ ಆಕ್ರಮಣಗಳ ಹಿನ್ನೆಲೆಯಲ್ಲಿ ಹಾಗೂ ಹೊಸ ನಾಗರಿಕತೆ ಮತ್ತು ಸಂಸ್ಕೃತಿಯನ್ನು ಹೇರುವ ಬ್ರಿಟಿಷರ ಪ್ರಯತ್ನಕ್ಕೆ ಪ್ರತಿಕ್ರಿಯೆಯಾಗಿ ವಂದೇ ಮಾತರಂ ಹೊರಹೊಮ್ಮಿತು ಎಂದು ಅವರು ಪ್ರತಿಪಾದಿಸಿದರು.

**ಧ್ವನಿ: ಅಮಿತ್ ಶಾ (  ಸೆಕೆಂಡ್ಸ್)**

**<>><><*><><<>**

ನಾಗರಿಕ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು ನಿನ್ನೆ ಇಂಡಿಗೊದ ಉನ್ನತ ಆಡಳಿತ ಮಂಡಳಿಯೊಂದಿಗೆ ಸಭೆ ನಡೆಸಿ, ವಾಯುಯಾನ ಪರಿಸ್ಥಿತಿ ಸಹಜ ಸ್ಥಿತಿಯತ್ತ ಕೈಗೊಂಡಿರುವ ಕ್ರಮಗಳನ್ನು ಪರಿಶೀಲಿಸಿದರು.  ಇಂಡಿಗೊ ಮುಖ್ಯ ಕಾರ್ಯನಿರ್ವಣಾಧಿಕಾರಿ ಪೀಟರ್ ಎಲ್ಬರ್ಸ್ ಅವರನ್ನು ಸಚಿವಾಲಯಕ್ಕೆ ಕರೆಸಿ, ಸಭೆ ನಡೆಸಲಾಗಿದೆ. ಡಿಸೆಂಬರ್ ೬ ರವರೆಗೆ ಪರಿಣಾಮ ಬೀರುವ ವಿಮಾನಗಳಿಗೆ ಪೂರ್ಣ ಮರುಪಾವತಿ ಪೂರ್ಣಗೊಂಡಿದೆ ಎಂದು ಎಲ್ಬರ್ಸ್ ದೃಢಪಡಿಸಿದ್ದಾರೆ. ಉಳಿದ ಮರುಪಾವತಿ ಮತ್ತು ಸಾಮಾನುಗಳ ಹಸ್ತಾಂತರವನ್ನು ತ್ವರಿತಗೊಳಿಸಲು ಕಟ್ಟುನಿಟ್ಟಿನ ಸೂಚನೆಯನ್ನು ಸಹ ನೀಡಲಾಗಿದೆ ಎಂದು ಸಚಿವರು ತಿಳಿಸಿದರು.. ಒಟ್ಟಾರೆ ಇಂಡಿಗೊ ಮಾರ್ಗಗಳನ್ನು ಮೊಟಕುಗೊಳಿಸುವುದು ಅಗತ್ಯವಿದೆ. ಇದು ವಿಮಾನಯಾನ ಕಾರ್ಯಾಚರಣೆಗಳನ್ನು ಸ್ಥಿರಗೊಳಿಸಲು ಸಹಾಯ ಮಾಡುತ್ತದೆ ಮತ್ತು ರದ್ದತಿಯನ್ನು ಕಡಿಮೆ ಮಾಡುತ್ತದೆ ಎಂದು ಅವರು ಹೇಳಿದರು. ದರ ಮಿತಿ ಮತ್ತು ಪ್ರಯಾಣಿಕರ ಅನುಕೂಲ ಕ್ರಮಗಳನ್ನು ಒಳಗೊಂಡಂತೆ ಸರ್ಕಾರದ ಎಲ್ಲಾ ನಿರ್ದೇಶನಗಳನ್ನು ಯಾವುದೇ ವಿನಾಯಿತಿ ಇಲ್ಲದೆ, ಪಾಲಿಸಲು ಇಂಡಿಗೊಗೆ ಸೂಚಿಸಲಾಗಿದೆ ಎಂದು ಸಚಿವ ರಾಮ್ ಮೋಹನ್ ನಾಯ್ಡು ಮಾಹಿತಿ ನೀಡಿದರು.

**<>><><*><><<>**

೧೬ ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಮಾಧ್ಯಮಗಳನ್ನು ಆಸ್ಟ್ರೇಲಿಯಾ ನಿಷೇಧಿಸಿದೆ. ಈ ಮೂಲಕ ಮಕ್ಕಳಿಗೆ ಸಾಮಾಜಿಕ ಮಾಧ್ಯಮ ನಿಷೇಧಿಸಿದ ಮೊದಲ ದೇಶವಾಗಿದೆ. ಟಿಕ್‌ಟಾಕ್, ಆಲ್ಫಾಬೆಟ್‌ನ ಯೂಟ್ಯೂಬ್, ಮೆಟಾದ ಇನ್‌ಸ್ಟಾಗ್ರಾಮ್ ಮತ್ತು ಫೇಸ್‌ಬುಕ್ ಸೇರಿದಂತೆ ವಿವಿಧ ವೇದಿಕೆಗಳಿಗೆ ಪ್ರವೇಶವನ್ನು ನಿರ್ಬಂಧಿಸಿದೆ. ಹೊಸ ಕಾನೂನಿನಡಿಯಲ್ಲಿ ಹತ್ತು ದೊಡ್ಡ ಪ್ಲಾಟ್‌ಫಾರ್ಮ್‌ಗಳಿಗೆ ಮಕ್ಕಳನ್ನು ನಿರ್ಬಂಧಿಸಲು ಆದೇಶಿಸಲಾಗಿದೆ. ಉಲ್ಲಂಘಿಸಿದರೆ, ೩೩ ದಶಲಕ್ಷ ಅಮೆರಿಕಾ ಡಾಲರ್‌ಗಳವರೆಗೆ ದಂಡವನ್ನು ವಿಧಿಸುವ ಎಚ್ಚರಿಕೆ ನೀಡಲಾಗಿದೆ. ಈ ನಿಷೇಧ ಜಾರಿಗೆ ಬಂದ ನಂತರ ೧೬ ವರ್ಷಕ್ಕಿಂತ ಕಡಿಮೆ ವಯಸ್ಸಿನ ಲಕ್ಷಾಂತರ ಮಕ್ಕಳು ಮತ್ತು ಹದಿಹರೆಯದವರು ತಮ್ಮ ಸಾಮಾಜಿಕ ಮಾಧ್ಯಮ ಖಾತೆಗಳಿಗೆ ಪ್ರವೇಶವನ್ನು ಕಳೆದುಕೊಂಡಿದ್ದಾರೆ. ಇನ್‌ಸ್ಟಾಗ್ರಾಮ್, ಫೇಸ್‌ಬುಕ್, ಥ್ರೆಡ್ಸ್, ಎಕ್ಸ್, ಸ್ನ್ಯಾಪ್‌ಚಾಟ್, ಕಿಕ್, ಟ್ವಿಚ್, ಟಿಕ್‌ಟಾಕ್, ರೆಡ್ಡಿಟ್ ಮತ್ತು ಯೂಟ್ಯೂಬ್ ಬಳಕಗೆ ನಿಷೇಧ ಏರಲಾಗಿದೆ. ನಿಷೇಧವು ಯುವಜನರನ್ನು ಹಾನಿಕಾರಕ ವಿಷಯಗಳಿಂದ ರಕ್ಷಿಸುವ ಗುರಿಯನ್ನು ಹೊಂದಿದೆ ಎಂದು ಆಸ್ಟ್ರೇಲಿಯಾ ಸರ್ಕಾರ ತಿಳಿಸಿದೆ. ಈ ಕ್ರಮವನ್ನು ಪ್ರಮುಖ ತಂತ್ರಜ್ಞಾನ ಕಂಪನಿಗಳು ಟೀಕಿಸಿವೆ. ಆದರೆ ಪೋಷಕರು ಮತ್ತು ಮಕ್ಕಳವಾದಿಗಳು ಇದನ್ನು ಸ್ವಾಗತಿಸಿದ್ದಾರೆ.

**<>><><*><><<>**

ಭಾರತವನ್ನು ಉದಯೋನ್ಮುಖ ಸಂವಹನ ತಂತ್ರಜ್ಞಾನಗಳಲ್ಲಿ ನಾಯಕನನ್ನಾಗಿ ಮಾಡಲು ೬-ಜಿ ನಾವೀನ್ಯತೆಯನ್ನು ವೇಗಗೊಳಿಸಲು ಸರ್ಕಾರದ ಅಚಲ ಬದ್ಧತೆಯನ್ನು ಕೇಂದ್ರ ಸಂವಹನ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಪುನರುಚ್ಚರಿಸಿದರು. ನವದೆಹಲಿಯಲ್ಲಿ ನಡೆದ ಭಾರತ್ ೬-ಜಿ ಮಿಷನ್ ಅಡಿಯಲ್ಲಿ ಅಪೆಕ್ಸ್ ಮಂಡಳಿ ಸಭೆಯ ಅಧ್ಯಕ್ಷತೆ ವಹಿಸಿದ ಅವರು ಮಾತನಾಡಿದರು. ಜಾಗತಿಕ ಪ್ರವೃತ್ತಿಗಳನ್ನು ಅನುಸರಿಸುವ ಬದಲು ದೂರಸಂಪರ್ಕ ತಂತ್ರಜ್ಞಾನಗಳ ಭವಿಷ್ಯವನ್ನು ರೂಪಿಸಲು ಭಾರತವು ದೃಢನಿಶ್ಚಯ ಹೊಂದಿದೆ ಎಂದು ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಹೇಳಿದರು. ಇದೇ ವೇಳೆ ೧೦೦ ೫ಜಿ ಯೂಸ್ ಕೇಸ್ ಪ್ರಯೋಗಾಲಯಗಳ ಸ್ಥಾಪನೆ, ಕಾರ್ಯಕ್ಷಮತೆ ಮತ್ತು ಪ್ರಭಾವವನ್ನು ದಾಖಲಿಸುವ ಮೂರು ಕಿರುಪುಸ್ತಕಗಳನ್ನು ಸಚಿವರು ಬಿಡುಗಡೆ ಮಾಡಿದರು.

**<>><><*><><<>**

ಒಡಿಶಾದ ಕಟಕ್‌ನ ಬಾರಾಬತಿ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಐದು ಪಂದ್ಯಗಳ ಟಿ೨೦ ಕ್ರಿಕೆಟ್ ಸರಣಿಯ ಮೊದಲ ಪಂದ್ಯದಲ್ಲಿ ಭಾರತ ತಂಡ, ದಕ್ಷಿಣ ಆಫ್ರಿಕಾವನ್ನು ೧೦೧ ರನ್‌ಗಳಿಂದ ಮಣಿಸಿತು. ಭಾರತ ನೀಡಿದ್ದ ೧೭೬ ರನ್‌ಗಳ ಗುರಿಯನ್ನು ಬೆನ್ನಟ್ಟಿದ ದಕ್ಷಿಣ ಆಫ್ರಿಕಾ, ಕೇವಲ ೭೪ ರನ್‌ಗಳಿಗೆ ತನ್ನೆಲ್ಲಾ ವಿಕೆಟ್ ಕಳೆದುಕೊಂಡಿತು. ಭಾರತದ ಪರ ಅರ್ಶ್‌ದೀಪ್ ಸಿಂಗ್, ಜಸ್ಪ್ರೀತ್ ಬುಮ್ರಾ, ವರುಣ್ ಚಕ್ರವರ್ತಿ ಮತ್ತು ಅಕ್ಷರ್ ಪಟೇಲ್ ತಲಾ ೨ ವಿಕೆಟ್ ಪಡೆದರು. ಭಾರತ ಮತ್ತು ದಕ್ಷಿಣ ಆಫ್ರಿಕಾ ತಂಡಗಳು, ನವಚಂಡೀಗಢದ ಮುಲ್ಲನ್‌ಪುರದಲ್ಲಿರುವ ಮಹಾರಾಜ ◌iiದವೀಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಾಳೆ ಸಂಜೆ ೭ ಗಂಟೆಗೆ ತಮ್ಮ ಎರಡನೇ ಪಂದ್ಯದಲ್ಲಿ ಮುಖಾಮುಖಿಯಾಗಲಿವೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><><ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>**